## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ-ಭದ್ರಾವತಿ ನಗರಗಳ ಪರಿಷ್ಕೃತ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆಗೆ (ಪರಿಷ್ಕೃತ- II) ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಕುರಿತು

ಓದಲಾಗಿದೆ:
1) ಸರ್ಕಾರದ ಅಧಿಸೂಚನೆ ಸಂ.ನಅಇ 20 ಬೆಂರೂಪ್ರಾ 2009 ದಿ :22-05-2010.
2) ಸರ್ಕಾರದ ಆದೇಶ ಸಂಖ್ಯೆ:ನಅಇ/194/ಬೆಂರೂಪ್ರಾ/2011 ದಿ:29-10-2011.
3) ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಶಿವಮೊಗ್ಗ ಇವರ ಪತ್ರ ಸಂಖ್ಯೆ. ಶಿನಪ್ರಾ/ನಯೋ/ಮ.ಯೋ (ಪ-II ಅಂತಿಮ/2010-11/392 ದಿ:20-07-2012.
4) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತ ಸಂಖ್ಯೆ.ನಗ್ರಾಯೋ(14)/ಉನಿ(ವಿ.ವಿ):ಮ.ಯೋ(ಪ.-II):ಅಂತಿಮ: ಶಿವಮೊಗ್ಗ:2012-13 ದಿ: 30.07.2012.

– – –

**ಪ್ರಸ್ತಾವನೆ:**

ಮೇಲೆ ಓದಲಾದ(2)ರ ಸರ್ಕಾರಿ ಆದೇಶದಲ್ಲಿ ಶಿವಮೊಗ್ಗ-ಭದ್ರಾವತಿ ನಗರಗಳ ಪರಿಷ್ಕೃತ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ (ಪ- II) ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಕ್ರ.ಸಂ. (3)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಶಿವಮೊಗ್ಗ ಇವರು ಶಿವಮೊಗ್ಗ-ಭದ್ರಾವತಿ ನಗರಗಳ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-II)ಯ ನಕ್ಷೆ ಹಾಗೂ ವರದಿಯನ್ನು ತಯಾರಿಸಿ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ ಶಿಫಾರಸ್ಸಿನೊಂದಿಗೆ ಸರ್ಕಾರದ ಅಂತಿಮ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಕ್ರ.ಸಂ. (4)ರಲ್ಲಿ ಓದಲಾದ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಶಿವಮೊಗ್ಗ ನಗರದ ಜನಸಂಖ್ಯೆಯು 2031ಕ್ಕೆ 7,50,000 ಗಳಿಗೆ ಮತ್ತು ಭದ್ರಾವತಿ ನಗರದ ಜನಸಂಖ್ಯೆಯು 2031ಕ್ಕೆ 2,70,000 ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆ (ಪರಿಷ್ಕೃತ-II) ತಯಾರಿಸಲಾಗಿದೆ. ಶಿವಮೊಗ್ಗ-ಭದ್ರಾವತಿ ನಗರಗಳ ಸ್ಥಳೀಯ ಯೋಜನಾ ಪ್ರದೇಶದ 417.28 ಚ.ಕಿ.ಮೀ. ವಿಸ್ತೀರ್ಣದಲ್ಲಿ ಶಿವಮೊಗ್ಗ ನಗರಕ್ಕೆ ಸಂಬಂಧಿಸಿದಂತೆ 10437.44 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಮತ್ತು ಭದ್ರಾವತಿ ನಗರಕ್ಕೆ 4125.53 ಹೆಕ್ಟೇರ್ ಪ್ರದೇಶವನ್ನ ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾ ಯೋಜನೆ (ಪರಿಷ್ಕೃತ-II)ಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಶಿವಮೊಗ್ಗ ನಗರದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಪ್ರದೇಶದಲ್ಲಿ ವಸತಿಗಾಗಿ 5147.80 ಹೆಕ್ಟೇರ್ (ಶೇ.52.81), ವಾಣಿಜ್ಯಕ್ಕಾಗಿ 443.26 ಹೆಕ್ಟೇರ್ (ಶೇ.4.55), ಕೈಗಾರಿಕೆಗಾಗಿ 547.14 ಹೆಕ್ಟೇರ್ (ಶೇ.5.61), ಸಾರ್ವಜನಿಕ/ ಅರೆ ಸಾರ್ವಜನಿಕ ಉಪಯೋಗಕ್ಕೆ 811.49 ಹೆಕ್ಟೇರ್ (ಶೇ.8.32), ಉದ್ಯಾನವನ / ಬಯಲು ಜಾಗಗಳಿಗೆ 1094.77 ಹೆಕ್ಟೇರ್ (ಶೇ.11.23), ಸಾರ್ವಜನಿಕ ಉಪಯುಕ್ತತೆಗಾಗಿ 73.81 ಹೆಕ್ಟೇರ್ (ಶೇ.0.76) ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 1628.52 ಹೆಕ್ಟೇರ್ (ಶೇ.16.72), ಜಲಾವೃತ ಪ್ರದೇಶವಾಗಿ 690.65 ಹೆಕ್ಟೇರ್, ಒಟ್ಟು 10437.44 ಹೆಕ್ಟೇರ್‌ಗಳು ನಗರೀಕರಣದ ಎಲ್ಲೆಯೆಂದು ನಿಗಧಿಪಡಿಸಲಾಗಿದೆ.

323
10/9/12

ಭದ್ರಾವತಿ ನಗರದ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಪ್ರದೇಶದಲ್ಲಿ ವಸತಿಗಾಗಿ 1894.77 ಹೆಕ್ಟೇರ್ (ಶೇ.48.79), ವಾಣಿಜ್ಯಕ್ಕಾಗಿ 140.75 ಹೆಕ್ಟೇರ್ (ಶೇ.3.62), ಕೈಗಾರಿಕೆಗಾಗಿ 477.25 ಹೆಕ್ಟೇರ್ (ಶೇ.12.29), ಸಾರ್ವಜನಿಕ/ ಅರೆ ಸಾರ್ವಜನಿಕ ಉಪಯೋಗಕ್ಕೆ 243.32 ಹೆಕ್ಟೇರ್ (ಶೇ.6.27), ಉದ್ಯಾನವನ / ಬಯಲು ಜಾಗೆಗಳಿಗೆ 527.90 ಹೆಕ್ಟೇರ್ (ಶೇ.13.59), ಸಾರ್ವಜನಿಕ ಉಪಯುಕ್ತತೆಗಾಗಿ 22.06 ಹೆಕ್ಟೇರ್ (ಶೇ.0.57) ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 577.70 ಹೆಕ್ಟೇರ್ (ಶೇ.14.87), ಕಾಯ್ದಿರಿಸಿದ್ದು ಜಲಾವೃತ ಪ್ರದೇಶವಾಗಿ 241.78 ಹೆಕ್ಟೇರ್ ಒಳಗೊಂಡಂತೆ ಒಟ್ಟು 4125.53 ಹೆಕ್ಟೇರ್‌ಗಳು ನಗರೀಕರಣದ ಎಲ್ಲೆಯೆಂದು ನಿಗಧಿಪಡಿಸಲಾಗಿದೆ.

ಮಹಾ ಯೋಜನೆ (ಪರಿಷ್ಕೃತ– II) ಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ಭೂ ಉಪಯೋಗ ವಲಯ ಮತ್ತು ನಿಯಮಾವಳಿಗಳನ್ನು ರೂಪಿಸಲಾಗಿದೆ. ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡುವಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ. ನಅಇ 159 ಬೆಂರೂಪ್ರಾ 2012, ಬೆಂಗಳೂರು. ದಿನಾಂಕ : 27.08.2012**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶಿವಮೊಗ್ಗ–ಭದ್ರಾವತಿ ನಗರಗಳ ಪರಿಷ್ಕೃತ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ – 2031 (ಪರಿಷ್ಕೃತ– II)ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆ – 2031 (ಪ– II) ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ಎಂ. ವಾಸುದೇವ ರಾವ್)
ಸರ್ಕಾರದ ಅಧೀನ ಕಾರ್ಯದರ್ಶಿಗಳು
ನಗರಾಭಿವೃದ್ಧಿ ಇಲಾಖೆ

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಪ್ರಕಟಣೆಗಾಗಿ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಲು ಕೋರಲಾಗಿದೆ.

ಪ್ರತಿ:

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ
3. ಆಯುಕ್ತರು ಶಿವಮೊಗ್ಗ ನಗರಾಭಿವೃದ್ಧಿ ಪ್ರಾಧಿಕಾರ, ಶಿವಮೊಗ್ಗ
4. ಆಯುಕ್ತರು, ನಗರಸಭೆ, ಶಿವಮೊಗ್ಗ : ಭದ್ರಾವತಿ
5. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ
6. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಶಿವಮೊಗ್ಗ ಇವರಿಗೆ ಮಾಹಿತಿಗಾಗಿ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.